# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 311 | Pages. 2 | Date: 05-11-2025, WEDNESDAY | RNI NO: KARKAN/2024/89601 | Kannada Daily

ಸಂಪುಟ : 01 – ಸಂಚಿಕೆ : 311 – ಪುಟಗಳು : 2 05-11-2025 ಬುಧವಾರ | Ph: 8762954248 | ದರ : ₹1


# ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಲಿದೆ ಶ್ರವಣಬೆಳಗೊಳ

## ನ. 9ಕ್ಕೆ 4ನೇ ಬೆಟ್ಟದ ಪದನಾಮ ಅನಾವರಣ | ಶಾಂತಿಸಾಗರ ಮಹಾರಾಜರ ಪ್ರತಿಮೆ ಪ್ರತಿಷ್ಠಾಪನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: 20ನೇ ಶತಮಾನದ ಪ್ರಥಮಾಚಾರ್ಯ ಚಾರಿತ್ರ ಚಕ್ರವರ್ತಿ ಆಚಾರ್ಯ ಶ್ರೀ 108ನೇ ಶಾಂತಿಸಾಗರ ಮಹಾರಾಜರ ಪ್ರತಿಮೆ ಪ್ರತಿಷ್ಠಾಪನಾ ಮಹೋತ್ಸವ ಮತ್ತು ಶ್ರೀ ಕ್ಷೇತ್ರದಲ್ಲಿ 4ನೇ ಬೆಟ್ಟದ ಪದನಾಮ ಅನಾವರಣ ಕಾರ್ಯಕ್ರಮ ನ. 9 ರಂದು ಜರುಗಲಿದೆ ಎಂದು ಶ್ರೀ ಕ್ಷೇತ್ರದ ಸ್ವಸ್ತಿಶ್ರೀ ಚಾರುಕೀರ್ತಿ ಪಂಡಿತಾ ಚಾರ್ಯವರ್ಯ ಭಟ್ಟಾರಕ ಪಟ್ಟಾಚಾರ್ಯವರ್ಯ ಸ್ವಾಮೀಜಿ ತಿಳಿಸಿದರು.

ತಾಲ್ಲೂಕಿನ ಶ್ರವಣಬೆಳಗೊಳದ ಶ್ರೀಮಠದಲ್ಲಿ ಸುದ್ದಿಗಾರರೊಂದಿಗೆ ಮಂಗಳವಾರ ಮಾತನಾಡಿದ ಅವರು, ಐತಿಹಾಸಿಕ ಕ್ಷಣಕ್ಕೆ ಶ್ರವಣಬೆಳಗೊಳ ಸಾಕ್ಷಿಯಾಗಲಿದೆ. ಉತ್ತರ ಕರ್ನಾಟಕದ ಭೋಜ ಗ್ರಾಮದಲ್ಲಿ ಸಾತನೌಡರಾಗಿ 1872 ರಲ್ಲಿ ಜನಿಸಿದ ಶಾಂತಿಸಾಗರ ಮಹಾರಾಜರು, ಧರ್ಮ ಚಿಂತನೆ, ರತ್ನತ್ರಯ, ಧರ್ಮ ಪಾಲನೆ, ನಿರತಿಚಾರ ಪೂರ್ವಕವಾಗಿ ಪಾಲಿಸುತ್ತಾ ದೇವಶಾಸ್ತ್ರ ಗುರುಗಳಲ್ಲಿ ಅನುರಕ್ತಿ, ಪ್ರಾಣಿ-ಪಕ್ಷಿಗಳ ಮೇಲಿನ ದಯೆ, ಕಿರಿಯರ ಮೇಲೆ ವಾತ್ಸಲ್ಯ, ಗುರುಗಳಲ್ಲಿ ಅಪಾರ ಭಕ್ತಿ ಹೊಂದಿದ್ದರು. 1912 ರಲ್ಲಿ ಶ್ರವಣಬೆಳಗೊಳಕ್ಕೆ ಆಗಮಿಸಿ ಬಾಹುಬಲಿ ದರ್ಶನ ಪಡೆದು ದಿಗಂಬರ ಮುನಿ ಪರಂಪರೆ ಅರಿತರು. 195ರಲ್ಲಿ ಸನ್ಯಾಸಪರೀಕ್ಷೆ ಪಡೆದುಕೊಂಡರು. ನಿಸ್ಪೃಹ ವ್ಯಕ್ತಿತ್ವ, ಮೃದುತ್ವ, ಸರಳತೆ, ಗಂಭೀರ ಸ್ವರೂಪದ ಆಚಾರ್ಯ ಶ್ರೀಗಳವರು, ವೈರಾಗ್ಯದಿಂದ ದೇವೇಂದ್ರ ಕೀರ್ತಿ ಸ್ವಾಮಿಗಳಾದವರಿಂದ ಕ್ಷುಲ್ಲಕ ದೀಕ್ಷೆ ಪಡೆದು ನಂತರ ಫಾಲ್ಗುಣ ಶುಕ್ಲ ಚತುರ್ದಶಿ



1920 ರಲ್ಲಿ ಸ್ವಯಂ ಮುನಿದೀಕ್ಷೆ ಪಡೆದರು ಎಂದರು.

ದೇಶ ವಿಹಾರ ಮಾಡಿ ದೆಹಲಿಯಲ್ಲಿ ನಿರಂತರ ಪ್ರತಿಭಟನೆ ನಡೆಸಿ ದಿಗಂಬರ ಮುನಿಗಳು ಎಲ್ಲೆಡೆ ವಿಹಾರ ಮಾಡಲು ಅಂದಿನ ಬ್ರಿಟೀಷ್ ಸರ್ಕಾರದ ಅನುಮತಿ ಕೊಡಿಸುವಲ್ಲಿ ಶ್ರೀಗಳ ಪಾತ್ರ ದೊಡ್ಡದು.

ಈ ಮೂಲಕ ದೇಶದಲ್ಲಿ ಶ್ರಮಣ ಮುನಿ ಪರಂಪರೆ ನಶಿಸುತ್ತಾ ಬರುವಾಗ ಚಾರಿತ್ರ ಸೂರ್ಯನ ಉದಯವಾದಂತೆ ಬಂದ ಮಹಾರಾಜರು, 9338ಕ್ಕೂ ಅಧಿಕ ಉಪವಾಸ ಆಚರಿಸಿ ಮಹಾತಪಸ್ವಿಗಳಾಗಿದ್ದಾರೆ. ಜೈನ ಧರ್ಮಕ್ಕೆ, ಶ್ರೀಕ್ಷೇತ್ರಕ್ಕೆ ಸಾಕಷ್ಟು ಇವರ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು.

1925ರಲ್ಲಿ ಮತ್ತೊಮ್ಮೆ ಶ್ರವಣಬೆಳಗೊಳಕ್ಕ ಆಗಮಿಸಿ ಮಹಾ ಮಸ್ತಕಾಭಿಷೇಕ ಸಾನಿಧ್ಯ ಪಧಾನ ಮಾಡಿದ್ದರು.

> ಶಾಂತಿಸಾಗರ ಮಹಾರಾಜರು ಬೆಳಗೊಳಕ್ಕೆ ಬಂದು 100 ವರ್ಷ ತುಂಬಿದ ಹಿನ್ನೆಲೆ ತಲಾ 7 ಇಂಚು ಉದ್ದದ ಹಿತ್ತಾಳೆಯ 100 ಪ್ರತಿಮೆ ನಿರ್ಮಿಸಿ ಕರ್ನಾಟಕದ ಎಲ್ಲ ಜಿನ ಮಂದಿರಗಳಲ್ಲಿ ಇಡಲು ನಿರ್ಧರಿಸಲಾಗಿದೆ. ಹಾಗೆಯೇ ಮಹಾರಾಜರ ಸಂಪೂರ್ಣ ಜೀವನ ಚರಿತ್ರೆ ಸಾವಿರು ಶಿಲಾಶಾಸನ ಸಹ ಕೆತ್ತಿಸಲಾಗಿದೆ. ಶ್ರೀಕ್ಷೇತ್ರದಲ್ಲಿ ಈಗಾಗಲೇ ವಿಂಧ್ಯಗಿರಿ, ಚಂದ್ರಗಿರಿ ಜೊತೆಗೆ ಇತ್ತೀಚೆಗೆ ಚಾರುಗಿರಿ ಬೆಟ್ಟ ಸೇರ್ಪಡೆಯಾಗಿದೆ. ಇದೀಗ 4ನೇ ಬೆಟ್ಟದ ಉದ್ಘಾಟನೆ ನಡೆಯುತ್ತಿದೆ.
>
> **- ಸ್ವಸ್ತಿಶ್ರೀ ಚಾರುಕೀರ್ತಿ ಪಂಡಿತಾಚಾರ್ಯವರ್ಯ ಭಟ್ಟಾರಕ ಪಟ್ಟಾಚಾರ್ಯವರ್ಯ ಸ್ವಾಮೀಜಿ**

ಇಂತಹ ಶ್ರೀಗಳು ಬೆಳಗೊಳಕ್ಕೆ ಬಂದು 100 ವಸಂತಗಳ ಪುಣ್ಯಸ್ಮೃತಿ ಶತಮಾನೋತ್ಸವದ ಸವಿ ನೆನಪಿನಲ್ಲಿ ಅವರ ಕೀರ್ತಿ ಶ್ರವಣಬೆಳಗೊಳದಲ್ಲಿ ಶಾಶ್ವತವಾಗಿರಲೆಂದು ವಿಂಧ್ಯಗಿರಿಯ ಪಕ್ಕದಲ್ಲಿರುವ ಮತ್ತೊಂದು ಬೆಟ್ಟದಲ್ಲಿ ಹತ್ತೂವರೆ ಅಡಿ ಉತ್ತದ ಮಹಾರಾಜರ ಮೂರುತಿಯ ಪ್ರತಿಷ್ಠಾಪನೆ ಮಾಡಲಾಗುತ್ತಿದೆ ಎಂದರು.

ನ. 9ರ ಮಧ್ಯಾಹ್ನ 12 ಗಂಟೆಗೆ ಶ್ರೀ ಕ್ಷೇತ್ರದ ಗೊಮ್ಮಟನಗರದ ಬಾಹುಬಲಿ ತಾಂತ್ರಿಕ ಮಹಾ ವಿದ್ಯಾಲಯದ ಆವರಣದಲ್ಲಿ ಕಾರ್ಯಕ್ರಮ ನಡೆಯಲಿದೆ. ಮಧ್ಯಾಹ್ನ 1 ಗಂಟೆಗೆ 4ನೇ ಬೆಟ್ಟದ ಮೇಲೆ ಆಚಾರ್ಯ ಶ್ರೀ ಶಾಂತಿಸಾಗರ ಮಹಾರಾಜರ ಪ್ರತಿಮೆ ಪ್ರತಿಷ್ಠಾಪನಾ ಚರಣ ಪಾದುಕೆ ಸ್ಥಾಪನೆ ಹಾಗೂ ಬೆಟ್ಟಕ್ಕೆ ಪದನಾಮ ಅನಾವರಣ ಮತ್ತು ಶಾಂತಿಸಾಗರ ಮಹಾರಾಜರ ಜೀವನ ಚರಿತ್ರೆಯ ಬೃಹತ್ ಶಿಲಾಶಾಸನ ಲೋಕಾರ್ಪಣೆ ಆಗಲಿದೆ ಎಂದು ಹೇಳಿದರು.

ಮಧ್ಯಾಹ್ನ 3 ಗಂಟೆಗೆ ಶ್ರೀಮಠದ ಮುಂಭಾಗದಿಂದ ಆಚಾರ್ಯ ಶ್ರೀ ಶಾಂತಿಸಾಗರ ಮಹಾರಾಜರ ಪ್ರತಿಮೆಯೊಂದಿಗೆ ವಿವಿಧ ಮಂಗಳ ವಾದ್ಯ, ಧರ್ಮ ಧ್ವಜ, ಮಂಗಳ ಕಳಶಗಳೊಂದಿಗೆ ಬೃಹತ್ ಮೆರವಣಿಗೆ ಹಾಗೂ ಸಂಜೆ 6 ಗಂಟೆಗೆ ಮೆರವಣಿಗೆಯಲ್ಲಿ ಸಾಗಿ ನೂತನವಾಗಿ ಸ್ಥಾಪಿತಗೊಂಡಿರುವ ಪ್ರತಿಮೆಯ ಎದುರು ಆರತಿ ಕಾರ್ಯಕ್ರಮ ಇರಲಿದೆ ಎಂದು ವಿವರಿಸಿದರು.

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ, ಸಚಿವ ಡಿ.ಸುಧಾಕರ್, ಸಂಸದ ಶ್ರೇಯಸ್ ಪಟೇಲ್ ಭಾಗಿಯಾಗುವರು. ಸ್ಥಳೀಯ ಶಾಸಕ ಸಿ.ಎನ್.ಬಾಲಕೃಷ್ಣ ಅಧ್ಯಕ್ಷತೆ ವಹಿಸುವರು ಎಂದು ಮಾಹಿತಿ ನೀಡಿದರು.

ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ಹಿರಿಯ ಸ್ವಾಮೀಜಿ ಅವರ ಸಂಕಲ್ಪದಂತೆ ಕಿರಿಯ ಶ್ರೀಗಳು ಶೈಕ್ಷಣಿಕ, ಆಧ್ಯಾತ್ಮಿಕ ಹಾಗೂ ಅಭಿವೃದ್ಧಿ ಕಾರ್ಯ ಮುಂದುವರಿಸಿದ್ದಾರೆ. ಇದಕ್ಕಾಗಿ ಎಲ್ಲ ರೀತಿಯ ಸಹಕಾರ ನೀಡುವ ಭರವಸೆ ನೀಡಿದರು.

# ಲೈಂಗಿಕ ದೌರ್ಜನ್ಯ ತಡೆಯುವ ಕಾಯ್ದೆಗಳ ಜಾಗೃತಿಯಿಂದ ಮಹಿಳೆಯರಿಗೆ ರಕ್ಷಣೆ ಸಾಧ್ಯ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಅರಿವು ಜ್ಞಾನದ ಸಂಕೇತವಾಗಿದೆ. ಪ್ರತಿಯೊಂದು ಹೆಣ್ಣು ಮಕ್ಕಳು ಜಾಗೃತಿ, ಅರಿವು ಹೊಂದಬೇಕು. ಹಾಗಾದರೆ ಶೇ. 70 ರಷ್ಟು ಅಪರಾಧ ಕಡಿಮೆಯಾಗುತ್ತದೆ ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌದರಿ ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ರಾಜ್ಯ ಮಹಿಳಾ ಆಯೋಗ, ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಾಸನಾಂಬ ಕಲಾಕ್ಷೇತ್ರದಲ್ಲಿ ಮಂಗಳವಾರ ಏರ್ಪಡಿಸಿದ್ದ ಸ್ಥಳೀಯ ಮತ್ತು ಆತಂರಿಕ ದೂರು ನಿವಾರಣಾ ಸಮಿತಿ ಸದಸ್ಯರಿಗೆ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯ ಕುರಿತ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯ ಎಂದರೆ ಹೆಣ್ಣು ಮಕ್ಕಳು ಕೆಲಸ ಮಾಡುವ ಸ್ಥಳಗಳಲ್ಲಿ ಲೈಂಗಿಕ ದೌರ್ಜನ್ಯ ತಡೆಗಟ್ಟುವುದಾಗಿದೆ ಹೆಣ್ಣು ಮಕ್ಕಳು ತಮಗೆ ಇರುವಂತಹ ಹಕ್ಕುಗಳ ಬಗೆಗೆ ತಿಳಿದುಕೊಳ್ಳುವುದಕ್ಕಾಗಿಯೇ ಈ ಕಾರ್ಯಾಗಾರವನ್ನು ಆಯೋಜಿಸಲಾಗಿದೆ. ಎಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಿ ಎಂದು ತಿಳಿಸಿದರು.

ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯ ಕುರಿತು 2013ರಲ್ಲಿಯೇ ಸುಪ್ರೀಂ ಕೋರ್ಟ್ ಗೆಜೆಟೆಡ್ ನೋಟಿಫಿಕೇಶನ್ ಮಾಡಿದೆ. ಹೆಣ್ಣು ಮಕ್ಕಳ ಸುರಕ್ಷತೆಯ ದೃಷ್ಟಿಯಿಂದಲೇ ಬಹಳಷ್ಟು ಕಾನೂನುಗಳಿವೆ. ಅವುಗಳ ಕುರಿತು ತಿಳಿದುಕೊಂಡ ಹೆಣ್ಣು ಹೆಚ್ಚು ಶಕ್ತಿಯುತವಾಗಿ ಸಮಾಜದಲ್ಲಿ ಹೋರಾಟ ಮಾಡುತ್ತಾಳೆ. ಆದ್ದರಿಂದ ಪ್ರತಿಯೊಂದು ಹೆಣ್ಣು ಮಕ್ಕಳು ಕಾನೂನಿನ ಕುರಿತು ತಿಳಿದುಕೊಳ್ಳಬೇಕು ಎಂದರು.

ಸರ್ಕಾರ ಪ್ರತಿ ಇಲಾಖೆಗಳಿಗೆ ಜಾಗೃತಿಯನ್ನು ಮೂಡಿಸುವುದಕ್ಕಾಗಿಯೇ ಕೋಟ್ಯಾಂತರ ರೂಪಾಯಿಗಳನ್ನು ಕೊಡುತ್ತದೆ. ಇವುಗಳ ಬಗೆಗೆ ಪ್ರತಿಯೊಬ್ಬ ಮಹಿಳೆಯೂ ತಮ್ಮ ರಕ್ಷಣೆಯ ಬಗೆಗಿರುವ ಕಾನೂನುಗಳ ಬಗ್ಗೆ ಜಾಗೃತಿ ಬೆಳೆಸಿಕೊಳ್ಳುವುದರಿಂದ ದೌರ್ಜನ್ಯದಿಂದ ರಕ್ಷಣೆ ಪಡೆಯಲು ಸಾಧ್ಯವಾಗುತ್ತದೆ ಎಂದರು.

ಕೇವಲ ಪುಸ್ತಕಕ್ಕೆ ಮಾತ್ರ ಸೀಮಿತವಾಗದೆ ವಾಸ್ತವವನ್ನು ತಿಳಿದುಕೊಳ್ಳುವಂತಹ ಜ್ಞಾನವಂತರಾಗಬೇಕು. ಪೋಲೀಸ್ ಇಲಾಖೆಯಲ್ಲಿ ನಿಮಗೆ ಸರಿಯಾಗಿ ಸ್ಪಂದಿಸದೆ ಇದ್ದಾಗ ಅಲ್ಲಿ ಒಂದು ಕ್ಯೂ ಆರ್ ಕೋಡ್ ಅನ್ನು ಇಟ್ಟಿರುತ್ತಾರೆ ಅದನ್ನು ಸ್ಕ್ಯಾನ್ ಮಾಡಿದಾಗ ನಿಮಗೆ ಕೆಲವೊಂದು ಪ್ರಶ್ನೆಗಳನ್ನು ಕೇಳಲಾಗುತ್ತದೆ. ನೀವು ನಿಮ್ಮ ಸಮಸ್ಯೆಗಳನ್ನ ವಿವರಿಸಬಹುದು. ಇದರ ಕುರಿತು ಅರಿವಿದ್ದಾಗ ಮಾತ್ರ ಈ ರೀತಿಯಾಗಿ ಸಮಸ್ಯೆಗಳನ್ನ ಬಗೆಹರಿಸಿಕೊಳ್ಳಬಹುದು ಎಂಬುದು ತಿಳಿಯುತ್ತದೆ. ಹಾಗಾಗಿ ಎಲ್ಲರೂ ಅರಿವು ಮತ್ತು ಜಾಗೃತಿಯನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.

# ನ. 9ರಂದು ಶ್ರವಣಬೆಳಗೊಳಕ್ಕೆ ಉಪ ರಾಷ್ಟ್ರಪತಿ ಭೇಟಿ

## ಅಗತ್ಯ ಸಿದ್ಧತೆಗೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಸೂಚನೆ | ಸ್ಥಳ ಪರಿಶೀಲನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ನ. 9 ರಂದು ಶ್ರವಣಬೆಳಗೊಳಕ್ಕೆ ಆಗಮಿಸುತ್ತಿದ್ದು ಸೂಕ್ತ ಭದ್ರತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದರು.

ತಾಲ್ಲೂಕಿನ ಶ್ರವಣಬೆಳಗೊಳದ ಪ್ರವಾಸಿ ಮಂದಿರದಲ್ಲಿ ಅಧಿಕಾರಿಗಳೊಂದಿಗೆ ಸಭೆಯಲ್ಲಿ ಮಾತನಾಡಿ,ಯಾವುದೇ ಲೋಪಕ್ಕೆ ಅವಕಾಶ ನೀಡದಂತೆ ಅಧಿಕಾರಿಗಳು ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸಲು ಸೂಚಿಸಿದರಲ್ಲದೆ, ಅಧಿಕಾರಿಗಳು ಕಾರ್ಯಕ್ರಮದ ಹಿನ್ನೆಲೆಯಲ್ಲಿ ಮಾಡಿಕೊಂಡಿರುವ ತಯಾರಿ ಬಗ್ಗೆ ವರದಿ ನೀಡುವಂತೆ ತಿಳಿಸಿದರು.

ಮಾರ್ಗಸೂಚಿಯಂತೆ ವೇದಿಕೆ ಮೇಲೆ ಎಲ್ಲಾ ಕುರ್ಚಿಗಳು ಒಂದೇ ರೀತಿ ಇರಬೇಕು. ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿಯನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು. ಎಸ್ಕಾರ್ಟ್ಸ್ ವಾಹನಗಳ ಸಂಖ್ಯೆ, ಯಾವ ಮಾದರಿ ವಾಹನ ಹಾಗೂ ವಾಹನ ಚಾಲಕರ ಮೊಬೈಲ್ ನಂಬರ್ ಪಡೆದುಕೊಳ್ಳಿ ಎಂದು ತಿಳಿಸಿದರು.

ನಿರಂತರವಾಗಿ ವಿದ್ಯುತ್ ಸಂಪರ್ಕ ಇರುವಂತೆ ನೋಡಿಕೊಳ್ಳಬೇಕು.



ಕಾರ್ಯಕ್ರಮದ ಸ್ಥಳದಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಬೇಕು. ರಸ್ತೆಗಳ ಇಕ್ಕೆಲೆಗಳಲ್ಲಿ ಸ್ವಚ್ಛತೆಗೆ ಕ್ರಮ, ಕಾರ್ಯಕ್ರಮದ ದಿನದಂದು ತಾತ್ಕಾಲಿಕವಾಗಿ ಮಾಂಸದ ಅಂಗಡಿಗಳ ಮುಚ್ಚಲು ಕ್ರಮ ವಹಿಸಬೇಕು. ಬೀದಿ ನಾಯಿಗಳ ಹಾವಳಿ ತಡೆಗೆ ಕೂಡ ಕ್ರಮ ವಹಿಸಬೇಕು. ಸೂಚನಾ ಫಲಕ ಹಾಕುವಂತೆ ಸೂಚಿಸಿದರು. ಸುಸಜ್ಜಿತ ಅಂಬುಲೆನ್ಸ್‌ನೊಂದಿಗೆ ನುರಿತ ಆರೋಗ್ಯ ಸಿಬ್ಬಂದಿ ನೇಮಿಸಬೇಕು. ಸಾರ್ವಜನಿಕರಿಗೂ ಕೂಡ ಒಂದು ಅಂಬುಲೆನ್ಸ್ ಪ್ರತ್ಯೇಕವಾಗಿರಬೇಕು. ಆಹಾರ ಸುರಕ್ಷತೆ ನಿಟ್ಟಿನಲ್ಲಿ ಪರಿಶೀಲಿಸಿ ಆಹಾರ ವಿತರಿಸಬೇಕು. ಅಗ್ನಿಶಾಮಕ ದಳದ ಹೆಲಿಪ್ಯಾಡ್ ಹಾಗೂ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಪ್ರತ್ಯೇಕ ವಾಹನ ಇರಿಸಬೇಕು. ಸಣ್ಣ ಸಣ್ಣ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಅಧಿಕಾರಿಗಳು ತಮಗೆ ವಹಿಸಿರುವ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ನಿರ್ದೇಶನ ನೀಡಿದರು.

ಅಪರ ಜಿಲ್ಲಾಧಿಕಾರಿ ಮಂಜುನಾಥ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಬಾಬು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅನಿಲ್, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕರಾದ ಅಭಿಯಂತರ ರಾಜು, ರುಕ್ಮಿಣಿ, ತಹಸೀಲ್ದಾರ್ ಶಂಕರ್, ಅರಸೀಕೆರೆ ತಹಸೀಲ್ದಾರ್ ಸಂತೋಷ್ ಹಾಜರಿದ್ದರು.

### ಸ್ಥಳ ಪರಿಶೀಲನೆ

ಸಭೆಗೂ ಮುನ್ನ ಜಿಲ್ಲಾಧಿಕಾರಿ ಹೆಲಿಪ್ಯಾಡ್‌ಗೆ ಭೇಟಿ ನೀಡಿ ಪರಿಶೀಲಿಸಿದರು. ನಂತರ ಮಠಕ್ಕೆ ಆಗಮಿಸಿ ಸ್ವಸ್ತಿಶ್ರೀ ಚಾರುಕೀರ್ತಿ ಪಂಡಿತಾ ಚಾರ್ಯವರ್ಯ ಭಟ್ಟಾರಕ ಪಟ್ಟಾಚಾರ್ಯವರ್ಯ ಸ್ವಾಮೀಜಿ ಅವರನ್ನು ಭೇಟಿ ಮಾಡಿ ಕಾರ್ಯಕ್ರಮ ಕುರಿತು ಚರ್ಚಿಸಿದರು.

ನಂತರ ಮಾತನಾಡಿದ ಸ್ವಾಮೀಜಿ ಅವರು ಆಚಾರ್ಯ ಶ್ರೀ ಶಾಂತಿಸಾಗರ ಮಹಾರಾಜರ ಪ್ರತಿಮೆ ಪ್ರತಿಷ್ಠಾಪನಾ ಚರಣ ಪಾದುಕೆ ಸ್ಥಾಪನೆ ಹಾಗೂ ಬೆಟ್ಟಕ್ಕೆ ಪದನಾಮ ಅನಾವರಣ ಮತ್ತು ಶಾಂತಿ ಸಾಗರ ಮಹಾರಾಜರ ಜೀವನ ಚರಿತ್ರೆಯ ಬೃಹತ್ ಶಿಲಾಶಾಸನ ಲೋಕಾರ್ಪಣೆ ಆಗಲಿದೆ ಎಂದು ತಿಳಿಸಿದರು.

ಶ್ರವಣಬೆಳಗೊಳಕ್ಕೆ ಶಾಂತಿ ಸಾಗರ ಮಹಾರಾಜರು ಬಂದು 100 ವರ್ಷ ತುಂಬಿದ ಹಿನ್ನೆಲೆಯಲ್ಲಿ ಸ್ವಾಮಿಜಿ ಅವರ ನೆನಪಿಗಾಗಿ ಬೆಟ್ಟಕ್ಕೆ ಹೆಸರಿಡುವ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಏಪ್ರಿಲ್ 24 ಕ್ಕೆ ಚಂದ್ರಗಿರಿ ಮಹೋತ್ಸವ ನಡೆಯಲಿದೆ ಆಗ ರಾಷ್ಟಪತಿಗಳು ಆಗಮಿಸುತ್ತಾರೆ. ಆ ಸಂದರ್ಭದಲ್ಲಿಯೇ 2030 ರಲ್ಲಿ ನಡೆಯುವ ಮಹಾ ಮಸ್ತಕಾಭಿಷೇಕದ ದಿನಾಂಕ ಘೋಷಣೆ ಮಾಡಲಾಗುವುದು ಎಂದು ತಿಳಿಸಿದರು.

ಶ್ರವಣಬೆಳಗೊಳದಲ್ಲಿ ಶಾಶ್ವತವಾಗಿ ಒಂದು ಹೆಲಿಪ್ಯಾಡ್ ನಿರ್ಮಾಣ ಆಗಬೇಕು. ಇಲ್ಲಿಗೆ ತುಂಬಾ ಅಗತ್ಯವಿದೆ ಎಂದು ತಿಳಿಸಿದರು. ಶಾಸಕ ಸಿ.ಎನ್. ಬಾಲಕೃಷ್ಣ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ಉಪವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಮತ್ತಿತರರಿದ್ದರು.

# ಶಾಂತಿಯುತ ಬದುಕಿಗೆ ದೈವಾರಾಧನೆ ಸಹಕಾರಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ಗ್ರಾಮಸ್ಥರು ಒಟ್ಟಾಗಿ ಶಾಂತಿ, ಸೌಹಾರ್ದದ ಬದುಕು ಕಟ್ಟಿಕೊಳ್ಳಲು ದೇವಾಲಯಗಳು ಪೂರಕವಾಗಿವೆ. ದೈವಭಕ್ತಿಯಿದ್ದರೆ ಒಳ್ಳೆಯ ಬದುಕು ನಡೆಸಬಹುದು ಎಂದು ಮಾಡಾಳು ನಿರಂಜನ ಪೀಠದ ಶ್ರೀ ರುದ್ರಮುನಿ ಸ್ವಾಮೀಜಿ ಹೇಳಿದರು.

ಕಣಕಟ್ಟೆ ಹೋಬಳಿಯ ದೈವ ಮೂಲೆ ಎಂದೇ ಹೆಸರು ವಾಸಿಯಾಗಿರುವ ಬೊಮ್ಮಸಮುದ್ರ ಗ್ರಾಮದಲ್ಲಿ ಆಯೋಜಿಸಿದ್ದ ಶ್ರೀ ಗುರು ಚನ್ನಬಸವೇಶ್ವರಸ್ವಾಮಿ ದೇವಾಲಯ ಜೀರ್ಣೋದ್ಧಾರ ಹಾಗು ಶಿಖರ ಕಳಸಾರೋಹಣ ಕಾರ್ಯಕ್ರಮ ಉದ್ಘಾಟಿಸಿ ಆಶೀರ್ವಚನ ನೀಡಿದರು. ಬೊಮ್ಮಸಮುದ್ರ ಪುಟ್ಟ ಗ್ರಾಮವಾದರೂ ಎಲ್ಲಾ ರಾಜಕೀಯ ಪಕ್ಷಗಳ ಕಾರ್ಯಕರ್ತರಿದ್ದಾರೆ. ಧಾರ್ಮಿಕ ವಿಚಾರದಲ್ಲಿ ಯಾರೂ ರಾಜಕೀಯ ಬೆರೆಸದೆ ಒಗ್ಗಟ್ಟಿನಿಂದ ಕಾರ್ಯಕ್ರಮ ಹಮ್ಮಿಕೊಂಡಿರುವುದು ಅಪಾರ ಖುಷಿ ತಂದಿದೆ. ಇದು ಅಕ್ಕ ಪಕ್ಕದ ಊರುಗಳಿಗೆ ಮಾದರಿಯಾಗಿದೆ. ಮುಂದೆಯೂ ಸಹ ವದಂತಿಗಳಿಗೆ ಕಿವಿಗೊಡದೆ ಎಲ್ಲರೂ ಇದೇ ರೀತಿ ಸಂಘಟನೆಯಾಗಿ ಗ್ರಾಮದ ಅಭಿವೃದ್ಧಿಗೆ ಕೈ ಜೋಡಿಸಬೇಕು ಎಂದರು.

ಸಾನ್ನಿಧ್ಯ ವಹಿಸಿದ್ದ ಹಾರನಹಳ್ಳಿ ಸುಕ್ಷೇತ್ರ ಕೋಡಿಮಠದ ಉತ್ತರಾಧಿಕಾರಿ ಚೇತನ್ ಮರಿದೇವರು ಮಾತನಾಡಿ, ಸಂತೋಷದ ಬದುಕಿಗೆ ಧರ್ಮಾಚರಣೆ ಮುಖ್ಯ. ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಜ್ಞಾನ ದಾಸೋಹದ ಅರಿವು ಹಾಗೂ ಆಚರಣೆ ಅತ್ಯವಶ್ಯ. ಒಳ್ಳೆಯ ಮಾತು ಉತ್ತಮ ನಡೆ ನುಡಿಗಳನ್ನು ಅಳವಡಿಸಿಕೊಂಡು ಆಚರಣೆಗೆ ತಂದಾಗ ಮಾತ್ರ ಜೀವನ ಸಾರ್ಥಕವಾಗಲಿದೆ ಎಂದು ಹೇಳಿದರು.

# ಜಿಲ್ಲೆಯಲ್ಲಿ ಭಯ ಹುಟ್ಟಿಸಿರುವ ಮನೆಗಳವು ಪ್ರಕರಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರ ಸೇರಿ ಜಿಲ್ಲಾದ್ಯಂತ ಮನೆಗಳವು ಪ್ರಕರಣ ದಿನದಿಂದ ದಿನಕ್ಕೆ ಹೆಚ್ಚುತ್ತಲೇ ಇದ್ದು ಸಾರ್ವಜನಿಕರು ಭಯಪಡುವಂತಾಗಿದೆ.

ನಗರದ ವಿವಿಧೆಡೆ ಕಳೆದ ಎರಡು ದಿನಗಳಲ್ಲಿ ಮನೆಗಳವು ನಡೆದಿದ್ದು ನಗದು ಸೇರಿ 7.74 ಲಕ್ಷ ರೂ. ಬೆಲೆಯ ಚಿನ್ನಾಭರಣ ಕಳವು ಮಾಡಲಾಗಿದೆ. ಗುಡ್ಡೇನಹಳ್ಳಿಯ ಕಾಂತಮಣಿ ಎಂಬುವರ ಮನೆಗೆ ಸೋಮವಾರ ನುಗ್ಗಿರುವ ಕಳ್ಳರು 3 ಲಕ್ಷ ರೂ. ಬೆಲೆಯ ಚಿನ್ನಾಭರಣ ಹಾಗೂ 1 ಲಕ್ಷ ರೂ. ನಗದು ಕಳವು ಮಾಡಿದ್ದಾರೆ.

ಸಂಜೆ 6ರ ಸಮಯದಲ್ಲಿ ಬಾಗಿಲು ಲಾಕ್ ಮಾಡಿ ವಾಕಿಂಗ್‌ಗೆಂದು ಬೀಗದ ಕಿಯನ್ನು ಮೀಟರ್ ಬೋರ್ಡ್‌ನಲ್ಲಿಟ್ಟು ತೆರಳಿದ್ದರು. ಒಂದು ಗಂಟೆ ಬಳಿಕ ವಾಪಾಸ್ ಬಂದಾಗ ಮನೆ ಬಾಗಿಲು ಮುರಿದಿರುವುದು ಗೊತ್ತಾಗಿದೆ. ಬೀರುವಿನಲ್ಲಿಟ್ಟದ್ದ 30 ಗ್ರಾಂ ತೂಕದ ಚಿನ್ನದ ಸರ ಮತ್ತು ಹಣ ದೋಚಿದ್ದಾರೆ. ಪೆನ್ಷನ್ ಮೊಹಲ್ಲಾ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಮನೆಯಲ್ಲಿ ಯಾರೂ ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು 50 ಸಾವಿರ ರೂ. ನಗದು ಹಾಗೂ 2.24 ಲಕ್ಷ ರೂ. ಬೆಲೆಯ ಚಿನ್ನಾಭರಣ ಕದ್ದಿರುವ ಘಟನೆ ತಾಲ್ಲೂಕಿನ ಚಿಕ್ಕೋನಹಳ್ಳಿ ಗ್ರಾಮದಲ್ಲಿ ನಡೆದಿದೆ.

ನಿವಾಸಿ ಅನು ಎಂಬುವವರು ಅ. 25 ರಂದು ಕುಟುಂಬ ಸಮೇತ ಮೈಸೂರಿಗೆ ತೆರಳಿದ್ದರು. ಅ. 27 ರಂದು ವಾಪಾಸ್ ಬಂದಾಗ ಕಳ್ಳತನ ವಿಷಯ ತಿಳಿದಿದೆ. ಬಲವಾದ ಆಯುಧದಿಂದ ಬಾಗಿಲು ಮೀಟಿ ಒಳನುಗ್ಗಿರುವ ಕಳ್ಳರು ಬೀರುವಿನಲ್ಲಿಟ್ಟದ್ದ 230 ಗ್ರಾಂ ತೂಕದ ಬೆಳ್ಳಿ ಲಕ್ಷ್ಮಿ ಮುಖವಾಡ, 132 ಗ್ರಾಂ ತೂಕದ ಬೆಳ್ಳಿ ದೀಪದ ಕಂಬ, 75 ಗ್ರಾಂ ತೂಕದ ಬೆಳ್ಳಿ ಕೈ ಬಳೆಗಳು, 40 ಗ್ರಾಂ ತೂಕದ 1 ಜೊತೆ ಬೆಳ್ಳಿಯ ಸೊಂಟದ ದಾರ, 26 ಗ್ರಾಂ ತೂಕದ ಬೆಳ್ಳಿಯ ಕುಂಕುಮದ ಬಟ್ಟಲು, 60 ಗ್ರಾಂ ತೂಕದ ಬೆಳ್ಳಿ ದೀಪ, 45 ಗ್ರಾಂ ತೂಕದ ಬೆಳ್ಳಿ ಕಾಲು ಬಳೆ, 3 ಗ್ರಾಂ ತೂಕದ 1 ಚಿನ್ನದ ಉಂಗುರ, 10 ಗ್ರಾಂ ತೂಕದ ಡೈಮಂಡ್ ಹರಳಿರುವ ಬೆಳ್ಳಿ ಉಂಗುರ, 2 ರೇಷ್ಮೆ ಸೀರೆ ಕದ್ದಿದ್ದಾರೆ.

ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಮನೆ ಬೀಗ ಮುರಿದು 1 ಲಕ್ಷ ರೂ. ಹಣ ಕದ್ದಿರುವ ಘಟನೆ ತಾಲ್ಲೂಕಿನ ಕೊಕ್ಕನಘಟ್ಟ ಗೇಟ್‌ನಲ್ಲಿ ನಡೆದಿದೆ. ಲಕ್ಷ್ಮಣ್ ಎಂಬುವವರು ಕುಟುಂಬ ಸಮೇತ ಮದುವೆಗಾಗಿ ಸೋಮವಾರ ಹಾಸನಕ್ಕೆ ಬಂದಿದ್ದಾಗ ಮನೆ ಬೀಗ ಮುರಿದು ಒಳನುಗ್ಗಿರುವ ಕಳ್ಳರು ಕೊಠಡಿಯಲ್ಲಿನ ಬಟ್ಟೆ, ಕಾಗದ ಪತ್ರಗಳನ್ನು ಚೆಲ್ಲಾಪಿಲ್ಲಿ ಮಾಡಿ ಹಣದೊಂದಿಗೆ ಪರಾರಿಯಾಗಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸೋಷಿಯಲ್ ಮೀಡಿಯಾ ಯಡವಟ್ಟು ಸಹಾಯ ಮಾಡಲು ಬಂದವನಿಗೆ ಕಳ್ಳನ ಪಟ್ಟ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಳೆನರಸೀಪುರ: ತನ್ನ ಬಡಾವಣೆಯ ಮಕ್ಕಳಿಗೆ ಅನುಕೂಲವಾಗಲಿ ಎಂದು ನೆರವಿಗೆ ಬಂದ ವ್ಯಕ್ತಿಯನ್ನು ಸಾಮಾಜಿಕ ಜಾಲತಾಣಗಳ ಮೂಲಕ ಕಳ್ಳನೆಂದು ಬಿಂಬಿಸಿರುವ ಘಟನೆ ಮಂಗಳವಾರ ಪಟ್ಟಣದಲ್ಲಿ ನಡೆದಿದೆ.

ಅಂಗನವಾಡಿಯಿಂದ ಮತ್ತೊಂದು ಅಂಗನವಾಡಿಗೆ ಮಕ್ಕಳಿಗೆ ನೀಡುವ ಆಹಾರ ಪದಾರ್ಥವನ್ನು ಬೈಕ್‌ನಲ್ಲಿ ತೆಗೆದುಕೊಂಡು ಹೋಗುತ್ತಿದ್ದುದನ್ನೇ ಕಳ್ಳತನವೆಂದು ಭಾವಿಸಿದ ಜನರು ಆತನನ್ನು ಬೈಕ್ ಸಮೇತ ಸೋಷಿಯಲ್ ಮಿಡಿಯಾದಲ್ಲಿ ವೈರಲ್ ಮಾಡಿದ್ದರಿಂದ ಪೇಚಿಗೆ ಸಿಲುಕಿಸಿದ್ದಾರೆ. ಸತ್ಯಾಸತ್ಯತೆ ಗೊತ್ತಾದ ಬಳಿಕ ಮೂಗಿನ ಮೇಲೆ ಬೆರಳಿಟ್ಟುಕೊಂಡಿದ್ದಾರೆ.

ಘಟನೆ ವಿವರ: ಪಟ್ಟಣದ ವಾರ್ಡ್ ನಂ. 23ರ ಸಿದ್ದಾರ್ಥ ನಗರ ವಾರ್ಡ್‌ನ ಅಂಗನವಾಡಿ ಕೇಂದ್ರದಿಂದ ಅಂದಾಜು 1 ಕಿ.ಮೀ. ದೂರದಲ್ಲಿರುವ ಪೂಜೆ ಕೊಪ್ಪಲು ಅಂಗನವಾಡಿಗೆ ವ್ಯಕ್ತಿಯೊಬ್ಬ 7 ಕೆ.ಜಿ. ತೂಕದ ಪುಡಿ ರೂಪದಲ್ಲಿರುವ ಆಹಾರ ಪದಾರ್ಥ ತೆಗೆದುಕೊಂಡು ಹೋಗುತ್ತಿದ್ದ. ಪೂಜೆ ಕೊಪ್ಪಲು ಅಂಗನವಾಡಿಯಲ್ಲಿ ಸಹಾಯಕರು ಇಲ್ಲದೇ ಇರುವುದರಿಂದ ಅಲ್ಲಿನ ಶಿಕ್ಷಕಿ ಸ್ಥಳೀಯ ವ್ಯಕ್ತಿಗೆ ಆ ಜವಾಬ್ದಾರಿ ವಹಿಸಿದ್ದರು. ಅವರ ನಿರ್ದೇಶನದಂತೆ ಆತ ಬಂದಿದ್ದ. ನೆರವಾಗಲೆಂದು ತನ್ನ ಬೈಕ್‌ನಲ್ಲಿ ಬಂದ ಅಮಾಯಕ ಸುಖಾ ಸುಮ್ಮನೆ ಕಳ್ಳನೆಂಬ ಪಟ್ಟ ಹೊರಬೇಕಾಯಿತು.

# ಜಿಲ್ಲೆಯಲ್ಲಿ ಅಧಿಕಾರಿಗಳಿಗೆ ಭಯದ ವಾತಾವರಣ: ರೇವಣ್ಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರ ಸರ್ವಾಧಿಕಾರಿ ಧೋರಣೆಗೆ ಬೇಸತ್ತು ಜಿಲ್ಲೆಯಲ್ಲಿನ ಖಾಲಿ ಹುದ್ದೆಗಳಿಗೆ ಬರಲು ಅಧಿಕಾರಿಗಳು ಹಿಂದೇಟು ಹಾಕುತ್ತಿದ್ದಾರೆ ಹಾಕುತ್ತಿದ್ದಾರೆ ಎಂದು ಮಾಜಿ ಸಚಿವ ಎಚ್.ಡಿ.ರೇವಣ್ಣ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಅಧಿಕಾರಿಗಳನ್ನು ಹೆದರಿಸಿ ಹಿಡಿತದಲ್ಲಿಟ್ಟುಕೊಳ್ಳಲು ಪ್ರಯತ್ನಿಸುತ್ತಿದ್ದಾರೆ. ಉಸ್ತುವಾರಿ ಸಚಿವರು ಅವರಿಗೆ ಬುದ್ಧಿ ಹೇಳದಿದ್ದರೆ ಜಿಲ್ಲೆಯ ಜನರೇ ಉತ್ತರ ಕೊಡುತ್ತಾರೆ. ಹಾಸನಾಂಬ ದರ್ಶನಕ್ಕೆ ನಾನು ಬಂದಾಗ ಎಡಿಆರ್‌ಓ ಸಂಶುದ್ದಿನ್ ನನ್ನ ಜೊತೆ ಕಾಲ್ನಡಿಗೆಯಲ್ಲಿ ಬಂದರೆಂಬ ಕಾರಣಕ್ಕೆ ಕಡ್ಡಾಯ ರಜೆ ಮೇಲೆ ಕಳುಹಿಸಿದ್ದಾರೆ. ಜನಪ್ರತಿನಿಧಿ ಜೊತೆಗೆ ಅಧಿಕಾರಿಗಳು ಮಾತನಾಡಬಾರದಾ..? ಶಾಸಕನಾಗಿ ಅವರೊಟ್ಟಿಗೆ ಮಾತನಾಡುವ ಅಧಿಕಾರ ನನಗಿಲ್ಲವೇ..? ಜಿಲ್ಲಾಧಿಕಾರಿಯ ಸರ್ವಾಧಿಕಾರಿ ನಡೆ ಒಳ್ಳೆಯದಲ್ಲ ಎಂದರು.

ಮುಸ್ಲಿಂ ಸಮುದಾಯದವರು ಓಟು ಹಾಕಿದ್ದರಿಂದಲೇ ರಾಜ್ಯದಲ್ಲಿ ಕಾಂಗ್ರೆಸ್‌ಗೆ 136 ಸ್ಥಾನ



ದೊರೆತಿದೆ. ಆ ಸಮುದಾಯದ ಅಧಿಕಾರಿಗಳಿಗೆ ಭದ್ರತೆ ಇಲ್ಲವಾಗಿದೆ. ಮುಸ್ಲಿಮರಿಗೆ ಬಿಜೆಪಿ ಅವಧಿಯಲ್ಲೂ ನೆಮ್ಮದಿ ಇಲ್ಲ. ಕಾಂಗ್ರೆಸ್ ಆಡಳಿತದಲ್ಲೂ ಅದೇ ಪರಿಸ್ಥಿತಿ ನಿರ್ಮಾಣವಾಗಿದೆಯೆಂದರು.

ಮಹಾನಗರ ಪಾಲಿಕೆ ಆಯುಕ್ತ ಆರ್.ಕೃಷ್ಣಮೂರ್ತಿ ಅವರನ್ನು ಕಡ್ಡಾಯ ರಜೆ ಮೇಲೆ ಕಳಿಸಲು ಕಾರಣ ಏನೆಂಬುದನ್ನು ಸಾರ್ವಜನಿಕವಾಗಿ ಹೇಳಬೇಕು. 15 ದಿನಗಳಿಂದ ಬಯೊಮೆಟ್ರಿಕ್ ಕೊಡಲು ಆಗದೆ ಇತರೆ ಕೆಲಸಗಳಿಗೆ ಸಮಸ್ಯೆಯಾಗುತ್ತಿದೆ. ಮಹಾನಗರ ಪಾಲಿಕೆಯಲ್ಲಿ ಸಮಸ್ಯೆಗಳು ಮಿತಿ ಮೀರಿವೆ. ಈ ಜಿಲ್ಲಾಧಿಕಾರಿಗೆ ಹೆದರಿ ಅಪರ ಜಿಲ್ಲಾಧಿಕಾರಿ ಹುದ್ದೆಗೆ ಯಾರೂ ಬರುತ್ತಿಲ್ಲ. ಎಡಿಸಿಯಾಗಿರುವ ಮಂಜುನಾಥ್ ಒಬ್ಬರೇ 14 ಹುದ್ದೆ ನಿಭಾಯಿಸಬೇಕಾಗಿದೆ. ಇವರಿಗೆ ಹೆದರಿ ಉಪವಿಭಾಗಾಧಿಕಾರಿ ಮಾರುತಿ ವರ್ಗ ಮಾಡಿಸಿಕೊಂಡು ಹೋದರು. ಅಬಕಾರಿ ಜಿಲ್ಲಾಧಿಕಾರಿ ಸಹ ನಿರ್ಗಮಿಸಿದರು. ಜಿಲ್ಲೆಗೆ ಬರಲು ಅಧಿಕಾರಿಗಳು ಭಯಪಡುತ್ತಿದ್ದಾರೆ. ಜಿಲ್ಲಾಧಿಕಾರಿಯ ದುರಹಂಕಾರ ವರ್ತನೆ ಮಿತಿ ಮೀರಿದೆ. ಬೈಕ್, ಸೈಕಲ್‌ನಲ್ಲಿ ನಗರ ಸುತ್ತುವ ಬದಲು ಸರ್ಕಾರ ಕೊಟ್ಟಿರುವ ಕಾರಿನಲ್ಲಿ ಸುತ್ತಾಡಿ ಜನರ ಸಮಸ್ಯೆಗೆ ಕಿವಿಯಾಗಿ ಎಂದು ಕಿವಿಮಾತು ಹೇಳಿದರು. ಅತಿಯಾದ ಮಳೆಯಿಂದ ಬೆಳೆ ಹಾಳಾಗಿದೆ. ಜಮೀನಿನಲ್ಲಿ ನೀರು ನಿಂತು ಅನ್ನದಾತರು ಕಂಗೆಟ್ಟಿದ್ದಾರೆ. ಆದರೆ ಜಿಲ್ಲಾಡಳಿತದಿಂದ ಸರ್ಕಾರಕ್ಕೆ ಇದುವರೆಗೆ ವರದಿ ಸಲ್ಲಿಕೆಯಾಗಿಲ್ಲ. ರಸ್ತೆಗಳೆಲ್ಲಾ ಗುಂಡಿ ಬಿದ್ದು ಬಿದ್ದು ನಿತ್ಯ ಸಾವು-ನೋವು ಸಂಭವಿಸುತ್ತಿವೆ. ಈ ಜಿಲ್ಲಾಧಿಕಾರಿ ಅವರು ಏನು ಮಾಡುತ್ತಿದ್ದಾರೆಂದು ಅರ್ಥವಾಗುತ್ತಿಲ್ಲ. ಇನ್ನು ಮುಂದೆಯೂ ದುರ್ವರ್ತನೆ ಮುಂದುವರಿಸಿದರೆ ಒಂದಲ್ಲ ಒಂದು ದಿನ ನೀವು ಸಿಕ್ಕಿಬೀಳುತ್ತೀರಿ. ಜನರೇ ನಿಮ್ಮ ದುರಂಹಕಾರ ಕಡಿಮೆ ಮಾಡಿಸುತ್ತಾರೆಂದು ಎಚ್ಚರಿಸಿದರು.

# ತೃತೀಯ ಲಿಂಗಿಗಳ ಸಮೀಕ್ಷೆಗೆ ಸಿಗದ ಸಕಾರಾತ್ಮಕ ಸ್ಪಂದನೆ

## ಒಂದು ತಿಂಗಳಲ್ಲಿ 193 ಜನರಷ್ಟೇ ಭಾಗಿ | 45 ದಿನಗಳ ವರೆಗೆ ಗಣತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ತೃತೀಯ ಲಿಂಗಿಗಳಿಗೂ ಸರ್ಕಾರದ ಸವಲತ್ತುಗಳು ತಲುಪಬೇಕು, ಅವರು ಎಲ್ಲರಂತೆ ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಬೇಕೆಂಬ ಉದ್ದೇಶದಿಂದ ರಾಜ್ಯದಲ್ಲೇ ಮೊದಲ ಬಾರಿಗೆ ಕೈಗೊಂಡಿರುವ ತೃತೀಯ ಲಿಂಗಿಗಳ ಸಮೀಕ್ಷೆಗೆ ಜಿಲ್ಲೆಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಅ.1 ರಿಂದ 45 ದಿನಗಳ ವರೆಗೆ ಸಮೀಕ್ಷೆ ನಡೆಸಲಾಗುತ್ತಿದೆ. ಜಿಲ್ಲೆಯಲ್ಲಿ 400 ತೃತೀಯ ಲಿಂಗಿಗಳು ಇದ್ದಾರೆಂಬ ಅಂದಾಜು ಇದೆಯಾದರೂ ಇದುವರೆಗೆ 193 ಜನರು ಮಾತ್ರ ಸರ್ವೆಯಲ್ಲಿ ಭಾಗವಹಿಸಿದ್ದಾರೆ. ಉಳಿದವರು ಸಮೀಕ್ಷೆಯಲ್ಲಿ ಪಾಲ್ಗೊಳ್ಳಲು ಹಿಂದೇಟು ಹಾಕುತ್ತಿರುವುದು ಅಧಿಕಾರಿಗಳನ್ನು ಇಕ್ಕಟ್ಟಿಗೆ ಸಿಲುಕಿಸಿದೆ. ಲೈಂಗಿಕ ಅಲ್ಪಸಂಖ್ಯಾತರಿಗಾಗಿಯೇ ಜಾರಿಯಲ್ಲಿರುವ ಮಹತ್ವದ ಯೋಜನೆಗಳಿಂದ ಫಲಾನುಭವಿಗಳು ಹೊರಗುಳಿಯಬಾರದೆನ್ನುವುದು ಸರ್ಕಾರದ ಉದ್ದೇಶ. ಲೈಂಗಿಕ ಅಲ್ಪಸಂಖ್ಯಾತರ ಶ್ರೇಯೋಭಿವೃದ್ಧಿಗಾಗಿ ಸರ್ಕಾರ 30 ಸಾವಿರ ರೂ. ಪ್ರೋತ್ಸಾಹ ಧನ ನೀಡುತ್ತಿದೆ. ವೈದ್ಯಕೀಯ, ವಿಮೆ ಸೇರಿ ಅನೇಕ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಆದರೆ ಅರ್ಜಿ ಸಲ್ಲಿಸುವವರು ಇಲ್ಲದೆ ಇರುವುದು ಕಾರ್ಯಕ್ರಮದ ವೈಫಲ್ಯತೆಗೆ ಕಾರಣವಾಗುತ್ತಿದೆ.

### ಸಮೀಕ್ಷೆ ಪ್ರಕ್ರಿಯೆ ಹೇಗೆ

ಪ್ರತಿ ತಾಲ್ಲೂಕಿಗೆ ಒಬ್ಬ ತೃತೀಯ ಲಿಂಗಿಗೆ ಸಮೀಕ್ಷೆ ಜವಾಬ್ದಾರಿ ನೀಡಿದ್ದು




ಅವರಿಗೆ 45 ದಿನಗಳಿಗೆ ನಿತ್ಯ 400 ರೂ. ಗೌರವಧನ ನೀಡಲಾಗುತ್ತದೆ. ತಾಲ್ಲೂಕು ಆಸ್ಪತ್ರೆ, ತಹಶೀಲ್ದಾರ್ ಕಚೇರಿಗಳಲ್ಲಿ ಕಚೇರಿ ಅವಧಿಯಲ್ಲಿರುತ್ತಾರೆ. ಗಣತಿದಾರರಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ನೂತನ ಟ್ಯಾಬ್‌ಗಳನ್ನು ನೀಡಲಾಗಿದೆ. ಜಿಲ್ಲಾದ್ಯಂತ ಕೇವಲ 400 ತೃತೀಯ ಲಿಂಗಿಗಳಿರುವುದರಿಂದ ತಾಲ್ಲೂಕುವಾರು ಮಾಹಿತಿ ಸಮೀಕ್ಷೆದಾರರ ಬಳಿ ಇದ್ದು ಅವರಿಗೆ ಕರೆ ಮಾಡಿ ಮಾಹಿತಿ ನೀಡುತ್ತಿದ್ದಾರೆ. ಆದರೆ ಬಹುತೇಕರು ಸಮೀಕ್ಷೆಯಿಂದ ದೂರ

> ಜಿಲ್ಲೆಯಲ್ಲಿ 400 ತೃತೀಯ ಲಿಂಗಿಗಳಿದ್ದು ಈವರೆಗೆ 193 ಜನರು ಸಮೀಕ್ಷೆಗೆ ಒಳಪಟ್ಟಿದ್ದಾರೆ. ಸರ್ಕಾರದ ಸವಲತ್ತುಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕೆಂಬ ಉದ್ದೇಶದಿಂದ ಸರ್ವೆ ನಡೆಸಲಾಗುತ್ತಿದೆ.
>
> **-ಪ್ರಿಯಾಂಕ,**
> **ಮಹಿಳಾ ಅಭಿವೃದ್ಧಿ ನಿಗಮ ಅಧಿಕಾರಿ**

ಉಳಿಯುವುದಾಗಿಯೇ ಹೇಳುತ್ತಿದ್ದಾರೆಂದು ಅಧಿಕಾರಿಗಳು ಹೇಳಿದ್ದಾರೆ.

### ಕುಟುಂಬದ ಮರ್ಯಾದೆ ಭಯ

ಹಾಸನದಲ್ಲಿ ತೃತೀಯ ಲಿಂಗಿಗಳ ಸಂಘಟನೆಗಾಗಿಯೇ ಪ್ರಕೃತಿ ಸೇವಾ ಸಂಸ್ಥೆ ಹಾಗೂ ಸಂಗಮ ಸಂಸ್ಥೆ ಕಾರ್ಯನಿರ್ವಹಿಸುತ್ತಿವೆ. ಈ ಎರಡೂ ಸಂಸ್ಥೆಗಳಿಂದ ನೋಂದಣಿ ಆಗಿರುವವರ ಸಂಖ್ಯೆಯಷ್ಟೇ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳ ಬಳಿ ಇರುವುದು. ಆದರೆ ತಾವು ತೃತೀಯ ಲಿಂಗಿಗಳೆಂದು ಬಹಿರಂಗವಾಗಿ ಹೇಳಿಕೊಳ್ಳದೆ ಇರುವವರ ಸಂಖ್ಯೆ ಹೆಚ್ಚಿದೆ. ಎಲ್ಲಿ ತಾವು ಲೈಂಗಿಕ ಅಲ್ಪಸಂಖ್ಯಾತರೆಂದು ಹೇಳಿಕೊಂಡರೆ ಕುಟುಂಬದ ಮರ್ಯಾದೆ ಹಾಳಾಗುತ್ತದೆ ಎಂದು ಅನೇಕರು ತಮ್ಮ ವಿವರವನ್ನು ಬಿಟ್ಟುಕೊಡುತ್ತಿಲ್ಲ. ಅಂತವರ ಮನವೊಲಿಕೆಯೂ ಅಧಿಕಾರಿಗಳಿಗೆ ಸಂಕಷ್ಟ ತಂದೊಡ್ಡಿದೆ.

# ಕಬ್ಬಳಿ ಪುಷ್ಕರಣಿಯಲ್ಲಿ ಚುಂಚಶ್ರೀಗಳ ವೈಭವದ ತೆಪ್ಪೋತ್ಸವ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ತಾಲ್ಲೂಕಿನ ಪುರಾಣ ಪ್ರಸಿದ್ಧ ಶ್ರೀ ಕ್ಷೇತ್ರ ಕಬ್ಬಳಿಯಲ್ಲಿ ಬಸವೇಶ್ವರ ಸ್ವಾಮಿಯ ಜಾತ್ರಾ ಮಹೋತ್ಸವ ಪ್ರಯುಕ್ತ ಸೋಮವಾರ ರಾತ್ರಿ ಚುಂಚಶ್ರೀಗಳ ಮುತ್ತಿನ ಪಲ್ಲಕ್ಕಿ ಉತ್ಸವ ಹಾಗೂ ಪುಷ್ಕರಣಿಯಲ್ಲಿ ತೆಪ್ಪೋತ್ಸವ ವೈಭವದಿಂದ ನಡೆಯಿತು.

ಸಂಜೆ 6.30ರಲ್ಲಿ ಶ್ರೀ ಬಸವೇಶ್ವರ ಸ್ವಾಮಿ ಸರ್ಪೋತ್ಸವ, ಶ್ರೀ ಚೌಡೇಶ್ವರಿದೇವಿ ಉತ್ಸವ, ಜಗದ್ಗುರು ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಪುತ್ಥಳಿಕೆ, ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಮುತ್ತಿನ ಪಲ್ಲಕ್ಕಿ ಉತ್ಸವ ವಿಜೃಂಭಣೆಯಿಂದ ನಡೆಯಿತು. ನಂತರ ದೇಗುಲದ ಆವರಣದಲ್ಲಿರುವ ಪುಷ್ಕರಣಿಯಲ್ಲಿ ಚುಂಚಶ್ರೀಗಳ ತೆಪ್ಪೋತ್ಸವ ವೈಭವದಿಂದ ಸಾಗಿತು. ಭಕ್ತರು ಜಯಘೋಷ ಮೊಳಗಿಸಿದರು. ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ಕಬ್ಬಳಿ ಶಾಖಾ ಮಠದ ಶ್ರೀ ಶಿವಪುತ್ರನಾಥ ಸ್ವಾಮೀಜಿ, ಶ್ರೀ ಗುರುಲಿಂಗ ಸ್ವಾಮೀಜಿ, ಗುಡಿಗೌಡ ಪ್ರಕಾಶ್, ಶಾಸಕ ಸಿ.ಎನ್.ಬಾಲಕೃಷ್ಣ, ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಶಿವನಂಜೇಗೌಡ, ಎನ್.ಆರ್.ರತ್ನರಾಜ್ ಇತರರಿದ್ದರು.

# ಸಾಲ ಬಾಧೆ: ರೈತ ನೇಣಿಗೆ ಶರಣು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಾಲ ಬಾಧೆ ತಾಳದೆ ರೈತ ನೇಣಿಗೆ ಶರಣಾಗಿರುವ ಘಟನೆ ತಾಲ್ಲೂಕಿನ ಗಾಡೇನಹಳ್ಳಿಯಲ್ಲಿ ನಡೆದಿದೆ.

ಸತೀಶ್ (50) ಮೃತರು. ಕೃಷಿ ಚಟುವಟಿಕೆಗಾಗಿ ಫೈನಾನ್ಸ್‌ನಲ್ಲಿ ಸಾಲ ಪಡೆದು ಟ್ರ್ಯಾಕ್ಟರ್ ತಂದಿದ್ದ ಸತೀಶ್ ವಿವಿಧ ಬ್ಯಾಂಕ್‌ಗಳಲ್ಲೂ ಸಾಲ ಮಾಡಿಕೊಂಡಿದ್ದರು. ಜೊತೆಗೆ ಹೃದಯ ಸಂಬಂಧಿ ಕಾಯಿಲೆಯಿಂದಲೂ ಬಳಲುತ್ತಿದ್ದರು. ಮೈಸೂರಿನ ಜಯದೇವ ಆಸ್ಪತ್ರೆಯಲ್ಲಿ ಚಿಕಿತ್ಸೆ ಸಹ ಪಡೆಯುತ್ತಿದ್ದರು.

ಅನಾರೋಗ್ಯ ಹಾಗೂ ಸಾಲದ ಬಾಬ್ತು ಹೆಚ್ಚುತ್ತಲೇ ಇದ್ದರಿಂದ ಜಿಗುಪ್ಸೆಗೊಂಡ ಅವರು ಮನೆಯ ಹಿಂಭಾಗದ ಕೊಟ್ಟಿಗೆಯಲ್ಲಿ ಭಾನುವಾರ ನೇಣು ಹಾಕಿಕೊಂಡಿದ್ದಾರೆ. ಮೃತರಿಗೆ ಪತ್ನಿ, ಇಬ್ಬರು ಮಕ್ಕಳಿದ್ದಾರೆ. ದುದ್ದ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕೆ.ಹೊಸಕೋಟೆ ಆಸ್ಪತ್ರೆಗೆ ನೂತನ ವೈದ್ಯರ ನಿಯೋಜನೆ



ಆಲೂರು: ಕೆಲವು ತಿಂಗಳಿಂದ ಖಾಲಿ ಇದ್ದ ಕೆ.ಹೊಸಕೋಟೆ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಡಾ. ವಿದ್ಯಾಶ್ರೀ ಅವರನ್ನು ನಿಯೋಜನೆ ಮಾಡಿದ್ದು ಗ್ರಾಮಸ್ಥರ ಹಲವು ದಿನಗಳ ಬೇಡಿಕೆಗೆ ಫಲ ದೊರೆತಿದೆ.

ವೈದ್ಯರಿಲ್ಲದೆ ಸಾರ್ವಜನಿಕರು ತುಂಬಾ ತೊಂದರೆ ಅನುಭವಿಸುತ್ತಿದ್ದರು. ಈ ಬಗ್ಗೆ ಹಲವು ಬಾರಿ ಅಧಿಕಾರಿ ಹಾಗೂ ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸಲಾಗಿತ್ತು. ಡಾ. ವಿದ್ಯಾಶ್ರೀ ಅವರು ಈ ಹಿಂದೆ 11 ವರ್ಷಗಳ ಕಾಲ ಆಸ್ಪತ್ರೆಯ ದಾದಿಯಾಗಿ ಕರ್ತವ್ಯ ನಿರ್ವಹಿಸಿದ್ದ ಕೋಮಲಾ ಅವರ ಪುತ್ರಿಯಾಗಿದ್ದಾರೆ.

ಆಸ್ಪತ್ರೆಗೆ ಪ್ರತಿ ಎರಡು ದಿನಕ್ಕೆ ಒಬ್ಬ ವೈದ್ಯರನ್ನು ನಿಯೋಜನೆ ಮಾಡಲಾಗುತ್ತಿತ್ತು. ಈಗ ಪೂರ್ಣ ಪ್ರಮಾಣದ ವೈದ್ಯರ ನಿಯೋಜನೆ ಮಾಡಿದ್ದು ಅನುಕೂಲವಾಗಿದೆ. ಸ್ಥಳೀಯರು ವೈದ್ಯರಿಗೆ ಎಲ್ಲಾ ರೀತಿಯ ಸಹಕಾರ ನೀಡಿ ಆಸ್ಪತ್ರೆಗೆ ಒಳ್ಳೆಯ ಹೆಸರು ತರಬೇಕೆಂದು ತಾಲ್ಲೂಕು ರೈತ ಮುಖಂಡ ಹೈದೂರು ಜಯಣ್ಣ, ತಾಲ್ಲೂಕು ಚುಟುಕು ಸಾಹಿತ್ಯ ಪರಿಷತ್ ನಿಯೋಜಿತ ಅಧ್ಯಕ್ಷ ಕೆ.ಎಸ್. ಅನಿಲ್ ಕುಮಾರ್ ಕೋರಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ನವೆಂಬರ್-04

**1605:** ಇಂಗ್ಲೆಂಡ್‌ನಲ್ಲಿ ಪ್ರಸಿದ್ಧ ಗನ್ ಪೌಡರ್ ಪ್ಲಾಟ್‌ಟ ಪತ್ತೆಯಾಯಿತು. ಗೈ ಫಾಕ್ಸ್ ಮತ್ತು ಅವರ ಸಹಚರರು ಪಾರ್ಲಿಮೆಂಟ್ ಕಟ್ಟಡವನ್ನು ಸ್ಫೋಟಿಸಲು ಸಂಚು ರೂಪಿಸಿದ್ದರು.

**1872:** ಅಮೆರಿಕಾದ ವಿಕ್ಟೋರಿಯಾ ವುಡ್‌ಹಲ್ ಅಧ್ಯಕ್ಷೀಯ ಚುನಾವಣೆಯಲ್ಲಿ ಮತ ಹಾಕಿದ ಮೊದಲ ಮಹಿಳೆ ಎಂದು ದಾಖಲಾಗಿದ್ದಾರೆ.

**1911:** ಇಟಲಿ-ಟರ್ಕಿ ಯುದ್ಧದ ವೇಳೆ ಇಟಾಲಿಯನ್ ವಿಮಾನದಿಂದ ಮೊಟ್ಟ ಮೊದಲ ಬಾರಿಗೆ ಬಾಂಬ್ ಹಾರಿಸಲಾಯಿತು.

**1937:** ಅಡಾಲ್ಫ್ ಹಿಟ್ಲರ್ ಅವರ ಪ್ರಸಿದ್ಧ ಹೋಸ್‌ಬಾಕ್ ಮೆಮೊರಾಂಡಂಟ ಭಾಷಣ ನೀಡಲಾಯಿತು. ಅದರಿಂದ ದ್ವಿತೀಯ ವಿಶ್ವಯುದ್ಧದ ಬೀಜ ಬಿತ್ತಿತು.

**2006:** ಇರಾಕ್‌ನ ಮಾಜಿ ರಾಷ್ಟ್ರಪತಿ ಸದ್ದಾಂ ಹುಸೇನ್ ಅವರಿಗೆ ನ್ಯಾಯಾಲಯವು ಮರಣದಂಡನೆ ವಿಧಿಸಿತು.

**1854:** ಸ್ಯಾಮುವೆಲ್ ಹಾನಿರ್ ಅವರು ಭಾರತದಲ್ಲಿ ಮೊದಲ ದೂರವಾಣಿ ಮಾರ್ಗ (ಟೆಲಿಗ್ರಾಫ್ ಲೈನ್) ಸ್ಥಾಪಿಸಿದರು.

**1951:** ಭಾರತದ ಮೊದಲ ರೇಡಿಯೋ ಸ್ಟೇಷನ್ ಆಲ್ ಇಂಡಿಯಾ ರೇಡಿಯೋ ಬೆಂಗಳೂರಿನಲ್ಲಿ ಪ್ರಾರಂಭವಾಯಿತು.

**1984:** ಇಂದಿರಾ ಗಾಂಧಿ ಹತ್ಯೆಯ ನಂತರದ ದಂಗೆಯ ಹಿನ್ನಲೆಯಲ್ಲಿ ದೇಶದಾದ್ಯಂತ ಕರ್ಫ್ಯೂ ಮತ್ತು ಅಶಾಂತಿ ಮುಂದುವರಿದಿತ್ತು.

**2013:** ಭಾರತದ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ಮಂಗಳಯಾನ ಅನ್ನು ಯಶಸ್ವಿಯಾಗಿ ಉಡಾಯಿಸಿತು. ಇದು ಮಂಗಳ ಗ್ರಹವನ್ನು ತಲುಪಿದ ಮೊದಲ ಏಷ್ಯಾದ ಮಿಷನ್ ಆಗಿತ್ತು.

### ಜನನ

**1855:** ಬಾಲಗಂಗಾಧರ ತಿಲಕ್, ಭಾರತೀಯ ಸ್ವಾತಂತ್ರ್ಯ ಹೋರಾಟಗಾರ

**1913:** ವಿವೇಕಾನಂದರ ತತ್ತ್ವಗಳಿಂದ ಪ್ರೇರಿತ ಸಮಾಜ ಸೇವಕ ಎಸ್. ರಾಧಾಕೃಷ್ಣನ್ ಅವರ ಶಿಷ್ಯ ಪ್ರೊ. ಎಂ.ವಿ.ಪೈ.

### ಮರಣ

**1879:** ಜೇಮ್ಸ್ ಕ್ಲಾರ್ಕ್ ಮ್ಯಾಕ್ಸ್‌ವೆಲ್, ಪ್ರಸಿದ್ಧ ಭೌತಶಾಸ್ತ್ರಜ್ಞ (ವಿದ್ಯುತ್ ಮತ್ತು ಚುಂಬಕತ್ವದ ಸಿದ್ಧಾಂತದ ಸ್ಥಾಪಕ)

**2000:** ಗೋಪಾಲ ಗಾಂಧಿ ಅವರ ತಾಯಿ ಲಕ್ಷ್ಮಿ ಗಾಂಧಿ

# ಮೌಲ್ಯಯುತ ಬರವಣಿಗೆಯಿಂದ ಸಮಾಜ ಸುಧಾರಣೆ ಕೆಲಸವಾಗಲಿ

## ಸಾಹಿತಿ ಶೈಲಜಾ ಹಾಸನ ಸಲಹೆ | ಮಾಣಿಕ್ಯ ಪ್ರಕಾಶನದಿಂದ ದತ್ತಿ ಪ್ರಶಸ್ತಿ ಪ್ರದಾನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಾಹಿತಿಗಳು ಮೌಲ್ಯಯುತ ಬರವಣಿಗೆ ಮೂಲಕ ಸಮಾಜವನ್ನು ಸರಿ ದಾರಿಗೆ ಕರೆದೊಯ್ಯುವ ಕೆಲಸ ಮಾಡಬೇಕು ಎಂದು ಸಾಹಿತಿ ಶೈಲಜಾ ಹಾಸನ ಹೇಳಿದರು.

ನಗರದ ಸಂಸ್ಕೃತ ಭವನದಲ್ಲಿ ಇತ್ತೀಚೆಗೆ ನಡೆದ ಮಾಣಿಕ್ಯ ಪ್ರಕಾಶನದ ದಶಮಾನೋತ್ಸವದಲ್ಲಿ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ, ಪ್ರಶಸ್ತಿ ಪಡೆದ ಕ್ಷಣ ತಾವು ಅತ್ಯಂತ ಶ್ರೇಷ್ಠರು ಎಂದು ಭಾವಿಸಿ ಬರವಣಿಗೆ ನಿಲ್ಲಿಸಬಾರದು. ಸಾಹಿತ್ಯ ಕೃಷಿಯನ್ನು ಮುಂದುವರಿಸುತ್ತಾ ಜವಾಬ್ದಾರಿ ಮತ್ತು ಹೊಣೆಗಾರಿಕೆ ಹೆಚ್ಚಿಸಿದೆ ಎಂದು ಭಾವಿಸಬೇಕು. ಆ ಮೂಲಕ ಕಿರಿಯರಿಗೆ ಮಾದರಿ ಆಗಬೇಕಾಗಿದೆ. ಸಾಹಿತ್ಯ ಸಮಾಜವನ್ನು ಬದಲಿಸಬಲ್ಲದು ಎಂಬುದನ್ನು ವಚನ ಸಾಹಿತ್ಯ ಸಾದರಪಡಿಸಿದೆ. ವಚನ




ಸಾಹಿತ್ಯ ಸಮಾಜದ ಅನೇಕ ಕುಂದು ಕೊರತೆಗಳನ್ನು ಹೋಗಲಾಡಿಸಿದೆ. ಹಾಗೆಯೇ ವಿಶ್ವಮಾನವ ಸಂದೇಶ ಸಾರಿದ ಕುವೆಂಪು ಅವರ ಮಂತ್ರ ಮಾಂಗಲ್ಯ ಪರಿಕಲ್ಪನೆ, ಈ ಸಮಾಜವನ್ನು ಬದಲಿಸುವ ನಿಟ್ಟಿನಲ್ಲಿ ಸಹಾಯಕವಾಗಿದೆ. ಹೊಸ ಪರಿಕಲ್ಪನೆಯನ್ನು ಇದು ಹುಟ್ಟುಹಾಕಿದೆ ಎಂದರು.

ಸಾಹಿತಿಗಳು ಎಂದಿಗೂ ಪ್ರಶಸ್ತಿ ಪುರಸ್ಕಾರಗಳ ಹಿಂದೆ ಹೋಗದೆ ಪ್ರಶಸ್ತಿಗಳೇ ಅವರನ್ನು ಹುಡುಕಿಕೊಂಡು ಬರುವ ವಾತಾವರಣ ನಿರ್ಮಾಣ ಆಗಬೇಕು. ಅಂತಹ ಶ್ರೇಷ್ಠ ಮೌಲ್ಯಯುತ ಕೃತಿಗಳ ರಚನೆ ಮಾಡುವತ್ತ ಸಾಹಿತಿಗಳು ನಿರತರಾಗಬೇಕು. ಸಾಹಿತ್ಯದಿಂದ ಸಮಾಜದ ಬದಲಾವಣೆ ಮಾಡುವ ನಿಟ್ಟಿನಲ್ಲಿ ಕುಂದು ಕೊರತೆ ನೀಗಿಸುವತ್ತ ಸಾಹಿತ್ಯ ರಚಿಸುವಂತೆ ನಿರತರಾದರೆ ನಿಜಕ್ಕೂ ಕೂಡ ಇಂತಹ ಪ್ರಶಸ್ತಿಗಳನ್ನ ನೀಡುವ ಪ್ರಯತ್ನಗಳಿಗೆ ಸಾರ್ಥಕ. ತಾನಷ್ಟೇ ಬೆಳೆದು, ತನಗಷ್ಟೇ ಎಲ್ಲವೂ ಬೇಕು ಎನ್ನುವ ಸ್ವಾರ್ಥ ಸಮಾಜದ ನಡುವೆಯೂ ನಿಸ್ವಾರ್ಥ ಮನಸ್ಸಿನ ವ್ಯಕ್ತಿಯೊಬ್ಬರು ಜಿಲ್ಲೆಯಲ್ಲಿ ನೆಲೆಯೂರಿ ಮಾಣಿಕ್ಯ ಪ್ರಕಾಶನದಂತಹ ಪ್ರಕಾಶನವನ್ನು ಪ್ರಾರಂಭಿಸಿ ಉದಯೋನ್ಮುಖ ಸಾಹಿತಿಗಳ ಕೃತಿಗಳನ್ನು ಹೊರ ತರುತ್ತಿರುವುದು ಶ್ಲಾಘನೀಯ ಎಂದರು.

### ದತ್ತಿ ಪ್ರಶಸ್ತಿ ಪುರಸ್ಕೃತರ ವಿವರ

ಎನ್. ಶೈಲಜಾ ಹಾಸನ ದತ್ತಿ ಪ್ರಬಂಧ ಮಾಣಿಕ್ಯ ಪ್ರಶಸ್ತಿಗೆ ಧಾರವಾಡದ ಲತಾ ಹೆಗಡೆ ಅವರ ಕೃಶಕಾಯದ ಕರಕರೆ, ಧಾರವಾಡದ ನಳಿನಿ ಟಿ. ಭೀಮಪ್ಪ ಅವರ ಐಸ್ ಪೈಸ್ ಕೃತಿಗಳು ಭಾಜನವಾದವು. ದಿ. ಸಿ.ಪಿ. ನಾರಾಯಣಾಚಾರ್ಯ ಸ್ಮಾರಕ ದತ್ತಿ ಕಾವ್ಯ ಮಾಣಿಕ್ಯ ಪ್ರಶಸ್ತಿಗೆ ಧಾರವಾಡದ ಎ.ಎ. ದರ್ಗಾ ಅವರ ಬೆಂದ ಬೆಳಸಿ ಹಾಗು ಚಿಕ್ಕಮಗಳೂರಿನ ಶಶಿ ತರೀಕೆರೆ ಅವರ ಪ್ಯೂಪಾ ಕೃತಿಗಳು ಹಾಗು ಮೈಸೂರಿನ ಎನ್.ಆರ್. ರೂಪಶ್ರೀ ಕಾದ ಕಂಗಳ ಕಂಪನ, ದಾವಣಗೆರೆಯ ಗೀತಾಮಂಜು ಬೆಣ್ಣೆಹಳ್ಳಿ ಅವರ ಕಿರು ಬೆಳಕಿನ ಸೂಜಿ ಕೃತಿಗಳು ಭಾಜನವಾದವು. ಪದ್ಮಾವತಿ ವೆಂಕಟೇಶ್ ದತ್ತಿ ಕಥಾ ಮಾಣಿಕ್ಯ ಪ್ರಶಸ್ತಿಗೆ ತುಮಕೂರಿನ ಹಡವನಹಳ್ಳಿ ವೀರಣ್ಣಗೌಡರ ಉರಿವ ದೀಪದ ಕೆಳಗೆ, ದಾವಣಗೆರೆಯ ಸುನೀತಾ ಪ್ರಕಾಶ್ ಅವರ ಪದ್ದವ್ವನ ಕೌದಿ ಮತ್ತು ಇತರ ಕಥೆಗಳು ಭಾಜನವಾದವು. ನಿಂಗಪ್ಪ ಮಲ್ಲಪ್ಪ ಮೇಟಿ ಸ್ಮಾರಕ ದತ್ತಿ ಸಂಶೋಧನಾ ಮಾಣಿಕ್ಯ ಪ್ರಶಸ್ತಿಗೆ ದಕ್ಷಿಣ ಕನ್ನಡದ ಸುಖಲಾಕ್ಷಿ ವೈ. ಸುವರ್ಣ ಅವರ ಮುಂಬಯಿ ಮತ್ತು ಮಹಿಳೆ, ಹಾಸನದ ಡಾ.ಹಂಪನಹಳ್ಳಿ ತಿಮ್ಮೇಗೌಡ ದಾಸೊಕ್ಕಲಿಗರು ಕೃತಿಗಳು ಭಾಜನವಾದವು. ಪ್ರಭಾವತಿ ಶೆಡ್ತಿ ದತ್ತಿ ನಾಟಕ ಮಾಣಿಕ್ಯ ಪ್ರಶಸ್ತಿಗೆ ಯಾದಗಿರಿಯ ಮಲ್ಲೇಶ ಬಿ. ಕೋನಾಳ ಅವರ ಕಲ್ಯಾಣದ ಕ್ರಾಂತಿ, ಧಾರವಾಡದ ಡಾ.ವೀಣಾ ಸಂಕನಗೌಡರ ಅವರ ಮೂರು ಮತ್ತೊಂದು ನಾಟಕಗಳು ಭಾಜನವಾದವು.

ದಿ.ಮಹಾದೇವಮ್ಮ, ದಿ. ಈ. ಕೃಷ್ಣಯ್ಯ ಸ್ಮಾರಕ ದತ್ತಿ ಕಾದಂಬರಿ ಮಾಣಿಕ್ಯ ಪ್ರಶಸ್ತಿಗೆ ಕೊಡಗು ಜಿಲ್ಲೆಯ ಉಳುವಂಗಡ ಕಾವೇರಿ ಉದಯ ಅವರ ಪವಿತ್ರ ಪ್ರೀತಿ ಪ್ರಾಪ್ತಿ, ಬೆಳಗಾವಿಯ ರಂಜಿತಾ ಮಹಾಜನ ಅವರ ಬೇಲಿಯನ್ನು ಭಾಜನವಾದವು. ದಿ. ಫಾತಿಮಾಬಿ ಜನಾಬ್ ಸೈಯದ್ ಅಬ್ದುಲ್ ಘನೀ ಸಾಬ್ ಸ್ಮಾರಕ ದತ್ತಿ ಗಜಲ್ ಮಾಣಿಕ್ಯ ಪ್ರಶಸ್ತಿಗೆ ಯಾದಗಿರಿಯ ಡಾ.ಸಿದ್ದರಾಮ ಹೊನ್ಕಲ್ ಅವರ ನಿನ್ನ ಜೊತೆ ಜೊತೆಯಲಿ, ಶಿವಮೊಗ್ಗದಯು. ಸಿರಾಜ್ ಅಹಮದ್ ಅವರ ನೆಲ ನುಡಿದ ನಾದ ಭಾಜನವಾದವು. ಕೆ.ವೈ. ಕಂದಕೂರ ದತ್ತಿ ಚುಟುಕು ಮಾಣಿಕ್ಯ ಪ್ರಶಸ್ತಿಗೆ ದಕ್ಷಿಣ ಕನ್ನಡದ ಹಸೀನಾ ಮಲ್ನಾಡ್ ಹನಿಗಡಲು ಭಾಜನವಾದರೆ ದಿ. ದೊಡ್ಡಚಂದಪ್ಪ ತಳ್ಳಿ ಪಾಟೀಲ ಸ್ಮಾರಕ ದತ್ತಿ ವಚನ ಮಾಣಿಕ್ಯ ಪ್ರಶಸ್ತಿಗೆ ಬೀದರ ಜಯಶ್ರೀ ಸುಕಾಲೆ ಅವರ ಶರಣ ಸೌರಭ ಭಾಜನವಾಯಿತು.

# ರೋಗ ನಿಯಂತ್ರಣಕ್ಕೆ ಎಲ್ಲರ ಸಹಕಾರ ಬೇಕಿದೆ: ಟಿಹೆಚ್‌ಒ ಡಾ. ಪುಷ್ಪಲತಾ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ತಾಲೂಕಿನಲ್ಲಿ ಮೂರು ಮಂದಿಯಲ್ಲಿ ಡೆಂಗ್ಯೂ ಕಂಡುಬಂದಿದ್ದು, ಚಿಕಿತ್ಸೆ ನೀಡಿ ಗುಣಪಡಿಸಲಾಗಿದೆ. ಸಮಗ್ರ ರೋಗಗಳ ನಿರ್ವಹಣೆ ಮತ್ತು ಮುನ್ನೆಚ್ಚರಿಕೆ ಕಾರ್ಯಕ್ರಮಗಳಿಗೆ ವಿವಿಧ ಇಲಾಖೆಗಳ ಸಹಕಾರ ಬೇಕಿದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ. ಪುಷ್ಪಲತಾ ಮನವಿ ಮಾಡಿದರು.

ತಹಸೀಲ್ದಾರ್ ಕಚೇರಿ ಸಭಾಂಗಣದಲ್ಲಿ ನಡೆದ ತಾಲೂಕು ಮಟ್ಟದ ಅಂತರ ಇಲಾಖೆಯ ಸಮಗ್ರ ರೋಗಗಳ ಕಣ್ಗಾವಲು ಸಮಿತಿ ಸಭೆಯಲ್ಲಿ ಮಾತನಾಡಿ, ತಹಸೀಲ್ದಾರ್ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಲ್ಲಿ ಸಾಂಕ್ರಾಮಿಕ ರೋಗಗಳು, ಆಶಾ ಕುಂದು ಕೊರತೆ ಬಗ್ಗೆ, ರಾಷ್ಟ್ರೀಯ ಆರ್‌ಬಿಎಸ್‌ಕೆ ಕಾರ್ಯಕ್ರಮ ಹಾಗೂ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಚರ್ಚಿಸುವುದಾಗಿದೆ. ಈ ಸಭೆಯಲ್ಲಿ ತಾಪಂ ಇಒ, ಬಿಇಒ, ಸಿಡಿಪಿಒ, ಪಪಂ ಮುಖ್ಯಾಧಿಕಾರಿ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ, ಅಕ್ಷರ ದಾಸೋಹ ಅಧಿಕಾರಿ, ಮೀನುಗಾರಿಕೆ ಇಲಾಖೆ, ಕೆಎಸ್‌ಆರ್‌ಟಿಸಿ ಮತ್ತು



ಕಾರ್ಮಿಕ ಇಲಾಖೆ, ಅಬಕಾರಿ ಹಾಗೂ ಪೊಲೀಸ್ ಇಲಾಖೆಗಳ ಅಧಿಕಾರಿಗಳು ಹಾಜರಿದ್ದು, ಈ ಎಲ್ಲಾ ಇಲಾಖೆಗಳು ಸಾರ್ವಜನಿಕ ಕ್ಷೇತ್ರದಲ್ಲಿ ಹೆಚ್ಚು ಕಾರ್ಯನಿರ್ವಹಿಸುತ್ತಿವೆ. ಆರೋಗ್ಯ ಇಲಾಖೆ ಕೈಗೊಳ್ಳುವ ಆರೋಗ್ಯ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಸಹಕಾರ ನೀಡಬೇಕೆಂದು ತಿಳಿಸಿದರು. ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗೃಹ ಆರೋಗ್ಯ ಕಾರ್ಯಕ್ರಮದಡಿ ನಮ್ಮ ಆರೋಗ್ಯ ಇಲಾಖೆ ಸಿಬ್ಬಂದಿ ಪ್ರತಿ ಮನೆಗೆ ತೆರಳಿ ಬಿಪಿ, ಸಕ್ಕರೆ ತಪಾಸಣೆ, ಕ್ಯಾನ್ಸರ್ ಇನ್ನೂ ಮುಂತಾದ ಆರೋಗ್ಯ ಸಮಸ್ಯೆ ಪತ್ತೆ ಹಚ್ಚಿ ವರದಿ ಸಲ್ಲಿಸುವ ಮೂಲಕ ಚಿಕಿತ್ಸೆ ನೀಡಲಾಗುತ್ತಿದೆ ಎಂದರು.

ತಾಲೂಕಿನ ವಿವಿಧ ಅಂಗನವಾಡಿ ಕೇಂದ್ರಗಳ ಮಕ್ಕಳ ಆರೋಗ್ಯ ತಪಾಸಣೆ ಮಾಡಿದ ವೇಳೆ ಸುಮಾರು 14 ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿರುವುದು ಕಂಡುಬಂದಿತು. ಈ ಮಕ್ಕಳಿಗೆ ಹೆಚ್ಚಿನ ಚಿಕಿತ್ಸೆಗೆ ಶಿಫಾರಸು ಮಾಡಲಾಗಿದೆ. ಸರ್ಕಾರದಿಂದ ಪೌಷ್ಠಿಕ ಆಹಾರ ನಿಡುವ ಕಾರ್ಯಕ್ರಮ ಜಾರಿಯಲ್ಲಿದೆ. ಹೀಗಿದ್ದರೂ ಕೂಡ ಮಕ್ಕಳಲ್ಲಿ ಅಪೌಷ್ಠಿಕತೆ ಕಂಡುಬಂದಿದೆ. ಈ ಬಗ್ಗೆ ಎಚ್ಚರಿಕೆ ಕ್ರಮ ಅಗತ್ಯವಾಗಿದೆ. ಎಲ್ಲಾ ಗರ್ಭಿಣಿಯರಿಗೆ ತಾಯಿ ಕಾರ್ಡ್ ವಿತರಣೆ ಮಾಡಲಾಗಿದೆ. ಈ ವೇಳೆ ವಲಸೆ ಕಾರ್ಮಿಕರು ಕಂಡುಬಂದಿದ್ದಾರೆ. ಇವರು ಯಾವುದೇ ದಾಖಲಾತಿ ನೀಡುತ್ತಿಲ್ಲದಿರುವುದು ನಮಗೆ ಕಷ್ಟಕರವಾಗಿದೆ. ಆದರೂ ಕೂಡ ಇಂತವರಿಗೆ ತಾಯಿ ಕಾರ್ಡ್ ನೀಡಲಾಗಿದೆ ಎಂದರು.

ಆಶಾ ಮೆಂಟರ್ ಕವಿತಾ ಮಾತನಾಡಿ, ಗ್ರಾಮೀಣ ಭಾಗದಲ್ಲಿ 182 ಮಂದಿ ಆಶಾ ಕಾರ್ಯಕರ್ತೆಯರು ಕಾರ್ಯನಿರ್ವಹಿಸುತ್ತಿದ್ದು, ಗೃಹ ಆರೋಗ್ಯ ಕಾರ್ಯಕ್ರಮದಡಿ ಪ್ರತಿ ಮನೆಗೆ ತೆರಳಿ ಆರೋಗ್ಯ ಸಮಸ್ಯೆ ಕುರಿತು ಸರ್ವೇ ಮಾಡಿ ನೆರವು ನೀಡುತ್ತಿದ್ದಾರೆ. ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮದಡಿ 54 ಕಾರ್ಯಕ್ರಮಗಳು ನಡೆಯುತ್ತಿವೆ. ಗ್ರಾಮೀಣ ಭಾಗದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿ ಆರೋಗ್ಯ ಅರಿವು, ಸಮಸ್ಯೆ ಕಂಡುಬಂದರೇ ಅಂತವರಿಗೆ ಉಚಿತವಾಗಿ ಸಿಗುವ ಆರೋಗ್ಯ ಸೌಕರ್ಯಗಳನ್ನು ಕಲ್ಪಿಸುವ ಕೆಲಸವನ್ನು ನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು.

ಸಭೆಯಲ್ಲಿ ಸಿಡಿಪಿಒ ವೆಂಕಟೇಶ್, ಆರ್‌ಬಿಎಸ್‌ಕೆ ವೈದ್ಯಾಧಿಕಾರಿಗಳಾದ ಮಾಧವ, ಲಾವಣ್ಯ, ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಮಂಜುಳ, ನಿರೀಕ್ಷಣಾಧಿಕಾರಿ, ಪರಮೇಶ್, ಪ್ರಾಥಮಿಕ ಆರೋಗ್ಯ ಕೇಂದ್ರದ ಸಂರಕ್ಷಣಾಧಿಕಾರಿ ಲೀನಕುಮಾರಿ, ಆರೋಗ್ಯ ನಿರೀಕ್ಷಣಾಧಿಕಾರಿ ಮೋಹನ್ ಇತರರಿದ್ದರು.

# ಹಂಪಾಪುರದಲ್ಲಿ ಚಿರತೆ ದಾಳಿ ಹಸುವಿಗೆ ಗಂಭೀರ ಗಾಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಅರಕಲಗೂಡು: ತಾಲ್ಲೂಕಿನ ರಾಮನಾಥಪುರ ಹೋಬಳಿ ಹಂಪಾಪುರ ಗ್ರಾಮದಲ್ಲಿ ಚಿರತೆ ದಾಳಿಗೆ ಹಸು ಗಂಭೀರ ಗಾಯಗೊಂಡಿರುವ ಘಟನೆ ನಡೆದಿದೆ.

ಹೋಬಳಿ ವ್ಯಾಪ್ತಿಯಲ್ಲಿ ಹಲವು ದಿನಗಳಿಂದ ಚಿರತೆ ಓಡಾಡುತ್ತಿದ್ದು ಅರಣ್ಯ ಇಲಾಖೆ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲವೆಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಕೊಟ್ಟಿಗೆಯಲ್ಲಿ ಕಟ್ಟಿದ ಹಸುವಿನ ಮೇಲೆ ಭಾನುವಾರ ರಾತ್ರಿ ಏಕಾಏಕಿ ದಾಳಿ ನಡೆಸಿರುವ ಚಿರತೆ ಕುತ್ತಿಗೆ ಭಾಗದಲ್ಲಿ ಗಂಭೀರ ಗಾಯಗೊಳಿಸಿದೆ. ಈ ಬಗ್ಗೆ ಅರಣ್ಯ ಇಲಾಖೆಗೆ ಮಾಹಿತಿ ನೀಡಿದರೆ ತಮ್ಮ ಬಳಿ ಚಿರತೆ ಸೆರೆಗೆ ಬೋನುಗಳಿಲ್ಲವೆಂದು ಅಸಹಾಯಕತೆ ವ್ಯಕ್ತಪಡಿಸಿದ್ದಾರೆ. ಹೀಗಾದರೆ ಸಮಸ್ಯೆಗೆ ಪರಿಹಾರ ಏನೆಂದು ಪ್ರಶ್ನಿಸಿದರು.

ಅರಣ್ಯದಂಚಿನ ಗ್ರಾಮದ ಮನೆಗಳ ಮೇಲೆ ನುಗ್ಗಿ ಬರುವ ಚಿರತೆ ಆಡು, ಕುರಿ, ಹಸುಗಳ ಮೇಲೆ ದಾಳಿ ಮಾಡುತ್ತಿದೆ. ಅದರಿಂದ ಜಮೀನು ಕೆಲಸಕ್ಕೆ ಹೋಗಲು ಭಯವಾಗುತ್ತಿದೆ. ಮಕ್ಕಳು ಹಾಗೂ ಮಹಿಳೆಯರು ಸಂಜೆ ಬಳಿಕ ಮನೆಯಿಂದ ಹೊರಬರಲು ಹಿಂದೇಟು ಹಾಕುತ್ತಿದ್ದಾರೆ. ಭಯದಿಂದ ವಿದ್ಯಾರ್ಥಿಗಳು ಶಾಲೆಗೆ ಹೋಗುತ್ತಿಲ್ಲ. ಅರಣ್ಯ ಇಲಾಖೆ ಅಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕು.

ಚಿರತೆ ಸೆರೆ ಹಿಡಿದು ಭಯ ರಹಿತ ವಾತಾವರಣ ಸೃಷ್ಟಿಸಬೇಕು. ಇಲ್ಲದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸುವ ಎಚ್ಚರಿಕೆ ನೀಡಿದ್ದಾರೆ.

# ಪ್ರತ್ಯೇಕ ಅಪಘಾತದಲ್ಲಿ ಇಬ್ಬರು ಸಾವು


ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲೆಯ ಶ್ರವಣಬೆಳಗೊಳ ಹಾಗೂ ಸಂಚಾರ ಠಾಣೆ ವ್ಯಾಪ್ತಿಯಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಇಬ್ಬರು ಮೃತಪಟ್ಟು ಮೂವರು ಗಾಯಗೊಂಡಿದ್ದಾರೆ.

ಪ್ಯಾಸೆಂಜರ್ ಆಟೋದಲ್ಲಿ ತೆರಳುತ್ತಿದ್ದ ವ್ಯಕ್ತಿ ಆಯತಪ್ಪಿ ಬಿದ್ದು ಮೃತಪಟ್ಟಿರುವ ಘಟನೆ ಶ್ರವಣಬೆಳಗೊಳ-ಕಿಕ್ಕೇರಿ ರಸ್ತೆಯಲ್ಲಿ ನಡೆದಿದೆ. ಚಿಕ್ಕೋನಹಳ್ಳಿ ಗ್ರಾಮದ ಉಮೇಶ್ ಮೃತರು. ಹೋಟೆಲ್ ಒಂದರಲ್ಲಿ ಕೆಲಸ ಮಾಡಿಕೊಂಡಿದ್ದ ಉಮೇಶ್ ಕೆಲಸ ಮುಗಿಸಿ ಸಾಸಲು ಗ್ರಾಮಕ್ಕೆ ಆಟೋದಲ್ಲಿ ಹೋಗುತ್ತಿದ್ದರು. ಚಾಲಕ ವೇಗವಾಗಿ ಗುಂಡಿ ಹತ್ತಿಸಿದ ಪರಿಣಾಮ ಆಯತಪ್ಪಿ ಕೆಳಗೆ ಬಿದ್ದು ಮೃತಪಟ್ಟಿದ್ದಾರೆ. ಶ್ರವಣಬೆಳಗೊಳ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಬೈಕ್‌ಗಳ ಮುಖಾಮುಖಿ ಡಿಕ್ಕಿಯಲ್ಲಿ ಒಬ್ಬ ಮೃತಪಟ್ಟು ಮೂವರು ಗಾಯಗೊಂಡಿರುವ ಘಟನೆ ಮಾರುತಿ ವೃತ್ತದ ಸಮೀಪ ನಡೆದಿದೆ. ಪೆನ್ಷನ್ ಮೊಹಲ್ಲಾ ನಿವಾಸಿ ವಸೀಂ ಅಹ್ಮದ್ ಮೃತ ಯುವಕ. ಸಂತೆಪೇಟೆಗೆ ಹೋಗಿ ಬರುವುದಾಗಿ ಮನೆಯಲ್ಲಿ ಹೇಳಿ ಸ್ನೇಹಿತ ಮೊಹಮ್ಮದ್ ಅಫ್ರಿದಿ ಜೊತೆಗೆ ಬೈಕ್‌ನಲ್ಲಿ ಹೋಗಿದ್ದ. ಈ ವೇಳೆ ಮಟನ್ ಮಾರ್ಕೆಟ್ ಕಡೆಯಿಂದ ವೇಗವಾಗಿ ಬಂದ ಮತ್ತೊಂದು ಬೈಕ್ ಸವಾರ ಡಿಕ್ಕಿ ಮಾಡಿದ್ದಾನೆ. ಅಪಘಾತದ ರಭಸಕ್ಕೆ ನಾಲ್ವರು ಗಾಯಗೊಂಡು ಎರಡೂ ಬೈಕ್‌ಗಳು ಸಂಪೂರ್ಣ ಜಖಂಗೊಂಡಿವೆ. ಹಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ವಸೀಂ ಅಹಮ್ಮದ್ ತಡರಾತ್ರಿ ಮೃತಪಟ್ಟಿದ್ದಾನೆ. ಉಳಿದ ಮೂವರಿಗೆ ಚಿಕಿತ್ಸೆ ಮುಂದುವರಿದಿದೆ. ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರಾಜ್ಯ ಮಟ್ಟದ ಕ್ರೀಡಾಕೂಟಕ್ಕೆ ವಿದ್ಯಾರ್ಥಿನಿಯರ ಆಯ್ಕೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರ ಹೊರವಲಯದ ಅರೆಕಲ್ ಹೊಸಹಳ್ಳಿ ಶ್ರೀ ಸತ್ಯನಾರಾಯಣ ಪ್ರಸನ್ನ ಪ್ರೌಢ ಶಾಲೆಯ ವಿದ್ಯಾರ್ಥಿನಿಯರು ಜಿಲ್ಲಾ ಮಟ್ಟದ 14 ವರ್ಷ ವಯೋಮಿತಿಯ ಕ್ರೀಡಾಕೂಟದಲ್ಲಿ ಉತ್ತಮ ಪ್ರದರ್ಶನದ ಮೂಲಕ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಡಿಸ್ಕಸ್ ಥ್ರೋ, ಎತ್ತರ ಜಿಗಿತದಲ್ಲಿ ಪ್ರಥಮ ಹಾಗೂ ಗುಂಡು ಎಸೆತದಲ್ಲಿ ವಿದ್ಯಾರ್ಥಿನಿ ಶರಣ್ಯ ತೃತೀಯ ಸ್ಥಾನ ಪಡೆದಿದ್ದಾರೆ. ಡಿಸ್ಕಸ್ ಥ್ರೋ ಮತ್ತು ಗುಂಡು ಎಸೆತದಲ್ಲಿ ಗಾಯತ್ರಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿನಿ ಕೃತಿಕಾ ಅವರು ಉದ್ದ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿಜೇತ ವಿದ್ಯಾರ್ಥಿಗಳಿಗೆ ಶಾಲಾ ಆಡಳಿತ ಮಂಡಳಿ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಅಭಿನಂದಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248